# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 967 |
| ಉತ್ತರಿಸಬೇಕಾದ ದಿನಾಂಕ | 14.03.2025 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಮಾನ್ಯ ಕಂದಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ಆತ್ಮಹತ್ಯೆ ಮಾಡಿಕೊಂಡ ರೈತರುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವರ್ಷವಾರು ವಿವರ ನೀಡುವುದು)</td><td>ರಾಜ್ಯದಲ್ಲಿ 2023-24 ಮತ್ತು 2024-25 ನೇ ಸಾಲಿನಲ್ಲಿ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ವರದಿಯಾಗಿರುವ ರೈತರ ಆತ್ಮಹತ್ಯೆಯ ಅರ್ಹ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><th>ಸಾಲು</th><th>ಒಟ್ಟು ಅರ್ಹ ಪ್ರಕರಣಗಳ ಸಂಖ್ಯೆ</th></tr>
<tr><td>2023-24</td><td>1082</td></tr>
<tr><td>2024-25</td><td>527</td></tr>
<tr><td>ಒಟ್ಟು</td><td>1609</td></tr>
</table>
ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ.</td></tr>
<tr><td>ಆ)</td><td>ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತ ರೈತರ ಆತ್ಮಹತ್ಯೆ ಪ್ರಕರಣದಲ್ಲಿ ಪರಿಹಾರ ವಿತರಿಸಲಾದ ಪ್ರಕರಣಗಳೆಷ್ಟು ಮತ್ತು ಪರಿಹಾರ ವಿತರಿಸಲು ಬಾಕಿ ಇರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)</td><td>ರಾಜ್ಯದಲ್ಲಿ 2023-24 ಮತ್ತು 2024-25 ನೇ ಸಾಲಿನಲ್ಲಿ ವರದಿಯಾಗಿರುವ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾದ ಮತ್ತು ವಿತರಿಸಲು ಬಾಕಿ ಇರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಸಾಲು</th><th>ವರದಿಯಾದ ಪ್ರಕರಣಗಳ ಸಂಖ್ಯೆ</th><th>ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಲ್ಲಿ ತಿರಸ್ಕೃತಗೊಂಡಿರುವ ಪ್ರಕರಣಗಳ ಸಂಖ್ಯೆ</th><th>ಅರ್ಹ ಪ್ರಕರಣಗಳ ಸಂಖ್ಯೆ</th><th>ಪರಿಹಾರ ಧನ ವಿತರಿಸಿರುವ ಪ್ರಕರಣಗಳ ಸಂಖ್ಯೆ</th><th>ಪರಿಹಾರ ಪಾವತಿಸಲು ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ</th><th>ಉಪವಿಭಾಗಾಧಿಕಾರಿಗಳ ಸಮಿತಿಯಲ್ಲಿ ತೀರ್ಮಾನಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ</th></tr>
<tr><td>23-24</td><td>1250</td><td>168</td><td>1082</td><td>1079</td><td>3</td><td>0</td></tr>
<tr><td>24-25</td><td>644</td><td>89</td><td>527</td><td>450</td><td>77</td><td>28</td></tr>
<tr><td>ಒಟ್ಟು</td><td>1894</td><td>257</td><td>1609</td><td>1529</td><td>80</td><td>28</td></tr>
</table>
ಜಿಲ್ಲಾವಾರು ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಿದೆ.</td></tr>
</table>

| | | |
|---|---|---|
| ಇ) | ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ರೈತ ಆತ್ಮಹತ್ಯೆ ಪ್ರಕರಣಗಳಲ್ಲಿ ಕೆಲವೊಂದು ಪ್ರಕರಣಗಳಿಗೆ ಈ ತನಕ ಪರಿಹಾರ ಧನ ವಿತರಿಸದಿರಲು ಕಾರಣವೇನು; ಮತ್ತು ಈ ತನಕ ಪರಿಹಾರ ಧನ ವಿತರಿಸದ ಪ್ರಕರಣಗಳಲ್ಲಿ ಪರಿಹಾರ ಧನ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | 2024-25 ನೇ ಸಾಲಿನಲ್ಲಿ ಉಪವಿಭಾಗಾಧಿಕಾರಿಗಳ ಸಮಿತಿಯಲ್ಲಿ ಒಟ್ಟು 28 ಪ್ರಕರಣಗಳು ತೀರ್ಮಾನಿಸಲು ಬಾಕಿ ಉಳಿದಿದ್ದು ಸಮಿತಿ ತೀರ್ಮಾನದ ನಂತರ ಅರ್ಹ ಪ್ರಕರಣಗಳಲ್ಲಿ ನಿಯಮಾನುಸಾರ ಪರಿಹಾರ ಪಾವತಿಸಲು ಕ್ರಮಕೈಗೊಳ್ಳಲಾಗುವುದು.<br>ಮುಂದುವರೆದು, ಸಮಿತಿ ಈಗಾಗಲೇ ತೀರ್ಮಾನಿಸಿರುವ ಅರ್ಹ 80 ಪ್ರಕರಣಗಳಲ್ಲಿ ಪರಿಹಾರ ಪಾವತಿ ಪ್ರಕ್ರಿಯೆಯು ಪ್ರಗತಿಯಲ್ಲಿದೆ. |
| ಈ) | ರಾಜ್ಯದಲ್ಲಿ ರೈತರ ಆತ್ಮಹತ್ಯೆ ತಡೆಗಟ್ಟಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು? | ರೈತರ ಆತ್ಮಹತ್ಯೆ ತಡೆಯಲು ಸರ್ಕಾರದಿಂದ ಅನುಷ್ಠಾನಗೊಂಡಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಅನುಬಂಧ-3ರಲ್ಲಿ ಒದಗಿಸಿದೆ. |

**ಕಡತ ಸಂಖ್ಯೆ:ಆರ್‌ಡಿ 49 ಕೆ.ಎ.ಟಿ/ ಎಸ್.ಎಸ್.ಪಿ 2025**

**( ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**

| ಅನುಬಂಧ-1 | | | | |
|---|---|---|---|---|
| **2023-24 ಮತ್ತು 24-25 ನೇ ಸಾಲಿನಲ್ಲಿ ವರದಿಯಾಗಿರುವ ರೈತರ ಆತ್ಮಹತ್ಯೆಯ ಅರ್ಹ ಪ್ರಕರಣಗಳ ವಿವರ** | | | | |
| **ಕ್ರ. ಸಂ** | **ಜಿಲ್ಲೆಗಳು** | **ವರದಿಯಾಗಿರುವ ಅರ್ಹ ಪ್ರಕರಣಗಳ ಸಂಖ್ಯೆ** | | |
| | | 2023-24 | 2024-25 | ಒಟ್ಟು |
| 1 | ಬಾಗಲಕೋಟೆ | 30 | 23 | 53 |
| 2 | ಬಳ್ಳಾರಿ | 17 | 3 | 20 |
| 3 | ಬೆಂಗಳೂರು(ಗ್ರಾ) | 0 | 0 | 0 |
| 4 | ಬೆಂಗಳೂರು(ನ) | 1 | 0 | 1 |
| 5 | ಬೆಳಗಾವಿ | 101 | 43 | 144 |
| 6 | ಬೀದರ್ | 75 | 21 | 96 |
| 7 | ಚಾಮರಾಜನಗರ | 1 | 0 | 1 |
| 8 | ಚಿಕ್ಕಬಳ್ಳಾಪುರ | 3 | 1 | 4 |
| 9 | ಚಿಕ್ಕಮಗಳೂರು | 62 | 19 | 81 |
| 10 | ಚಿತ್ರದುರ್ಗ | 27 | 21 | 48 |
| 11 | ದಕ್ಷಿಣಕನ್ನಡ | 5 | 4 | 9 |
| 12 | ದಾವಣಗೆರೆ | 49 | 27 | 76 |
| 13 | ಧಾರವಾಡ | 77 | 24 | 101 |
| 14 | ಗದಗ | 26 | 18 | 44 |
| 15 | ಹಾಸನ | 39 | 24 | 63 |
| 16 | ಹಾವೇರಿ | 105 | 74 | 179 |
| 17 | ಕಲಬುರಗಿ | 68 | 38 | 106 |
| 18 | ಕೊಡಗು | 5 | 4 | 9 |
| 19 | ಕೋಲಾರ | 1 | 0 | 1 |
| 20 | ಕೊಪ್ಪಳ | 26 | 7 | 33 |
| 21 | ಮಂಡ್ಯ | 45 | 16 | 61 |
| 22 | ಮೈಸೂರು | 68 | 41 | 109 |
| 23 | ರಾಯಚೂರು | 17 | 14 | 31 |
| 24 | ರಾಮನಗರ | 7 | 2 | 9 |
| 25 | ಶಿವಮೊಗ್ಗ | 50 | 33 | 83 |
| 26 | ತುಮಕೂರು | 17 | 9 | 26 |
| 27 | ಉಡುಪಿ | 0 | 0 | 0 |
| 28 | ಉತ್ತರಕನ್ನಡ | 9 | 7 | 16 |
| 29 | ವಿಜಯಪುರ | 58 | 17 | 75 |
| 30 | ವಿಜಯನಗರ | 27 | 11 | 38 |
| 31 | ಯಾದಗಿರಿ | 66 | 26 | 92 |
| **ಒಟ್ಟು** | | **1082** | **527** | 1609 |

G. N. Susheela

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ. & ಬಾ.ನಿ)
ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು – 560 001

## ಅನುಬಂಧ-2

**23-24 ಮತ್ತು 24-25 ನೇ ಸಾಲಿನ ರೈತರ ಆತ್ಮಹತ್ಯೆಯ ಅರ್ಹ ಪ್ರಕರಣಗಳ ಪರಿಹಾರ ಪಾವತಿ ಜಿಲ್ಲಾವಾರು ವಿವರ (ದಿನಾಂಕ: 11.03.2025 ರಲ್ಲಿದ್ದಂತೆ)**

| ಕ್ರ.ಸಂ. | ಜಿಲ್ಲೆಗಳು | 2023-24 | | | 2024-25 | | |
|---|---|---|---|---|---|---|---|
| | | ಅರ್ಹ ಪ್ರಕರಣಗಳು | ಪರಿಹಾರ ಧನ ವಿತರಿಸಿರುವ ಪ್ರಕರಣಗಳು | ಪರಿಹಾರ ಪಾವತಿಸಲು ಬಾಕಿ ಉಳಿದಿರುವ ಪ್ರಕರಣಗಳು | ಅರ್ಹ ಪ್ರಕರಣ | ಪರಿಹಾರ ಧನ ವಿತರಿಸಿರುವ ಪ್ರಕರಣಗಳು | ಪರಿಹಾರ ಪಾವತಿಸಲು ಬಾಕಿ ಉಳಿದಿರುವ ಪ್ರಕರಣಗಳು |
| 1 | ಬಾಗಲಕೋಟೆ | 30 | 30 | 0 | 23 | 20 | 3 |
| 2 | ಬಳ್ಳಾರಿ | 17 | 17 | 0 | 3 | 3 | 0 |
| 3 | ಬೆಂಗಳೂರು(ಗ್ರಾ) | 0 | 0 | 0 | 0 | 0 | 0 |
| 4 | ಬೆಂಗಳೂರು(ನ) | 1 | 1 | 0 | 0 | 0 | 0 |
| 5 | ಬೆಳಗಾವಿ | 101 | 101 | 0 | 43 | 42 | 1 |
| 6 | ಬೀದರ್ | 75 | 75 | 0 | 21 | 16 | 5 |
| 7 | ಚಾಮರಾಜನಗರ | 1 | 1 | 0 | 0 | 0 | 0 |
| 8 | ಚಿಕ್ಕಬಳ್ಳಾಪುರ | 3 | 3 | 0 | 1 | 1 | 0 |
| 9 | ಚಿಕ್ಕಮಗಳೂರು | 62 | 62 | 0 | 19 | 18 | 1 |
| 10 | ಚಿತ್ರದುರ್ಗ | 27 | 27 | 0 | 21 | 18 | 3 |
| 11 | ದಕ್ಷಿಣಕನ್ನಡ | 5 | 5 | 0 | 4 | 4 | 0 |
| 12 | ದಾವಣಗೆರೆ | 49 | 49 | 0 | 27 | 23 | 4 |
| 13 | ಧಾರವಾಡ | 77 | 75 | 2 | 24 | 20 | 4 |
| 14 | ಗದಗ | 26 | 26 | 0 | 18 | 17 | 1 |
| 15 | ಹಾಸನ | 39 | 39 | 0 | 24 | 24 | 0 |
| 16 | ಹಾವೇರಿ | 105 | 104 | 1 | 74 | 59 | 15 |
| 17 | ಕಲಬುರಗಿ | 68 | 68 | 0 | 38 | 26 | 12 |
| 18 | ಕೊಡಗು | 5 | 5 | 0 | 4 | 3 | 1 |
| 19 | ಕೋಲಾರ | 1 | 1 | 0 | 0 | 0 | 0 |
| 20 | ಕೊಪ್ಪಳ | 26 | 26 | 0 | 7 | 4 | 3 |
| 21 | ಮಂಡ್ಯ | 45 | 45 | 0 | 16 | 15 | 1 |
| 22 | ಮೈಸೂರು | 68 | 68 | 0 | 41 | 39 | 2 |
| 23 | ರಾಯಚೂರು | 17 | 17 | 0 | 14 | 8 | 6 |
| 24 | ರಾಮನಗರ | 7 | 7 | 0 | 2 | 2 | 0 |
| 25 | ಶಿವಮೊಗ್ಗ | 50 | 50 | 0 | 33 | 28 | 5 |
| 26 | ತುಮಕೂರು | 17 | 17 | 0 | 9 | 5 | 4 |
| 27 | ಉಡುಪಿ | 0 | 0 | 0 | 0 | 0 | 0 |
| 28 | ಉತ್ತರಕನ್ನಡ | 9 | 9 | 0 | 7 | 7 | 0 |
| 29 | ವಿಜಯಪುರ | 58 | 58 | 0 | 17 | 15 | 2 |
| 30 | ವಿಜಯನಗರ | 27 | 27 | 0 | 11 | 11 | 0 |
| 31 | ಯಾದಗಿರಿ | 66 | 66 | 0 | 26 | 22 | 4 |
| | **ಒಟ್ಟು** | **1082** | **1079** | 3 | **527** | **450** | 77 |

G. N. Susheela

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ. & ಬಾ.ವಿ)
ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು - 560 001

## ಅನುಬಂಧ-3

**ರೈತರ ಅನುಕೂಲಕ್ಕಾಗಿ ಈ ಕೆಳಗಿನ ವಿವಿಧ ಯೋಜನೆ / ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.**

- ಬೀಜಗಳ ಪೂರೈಕೆ: ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

- ಕೃಷಿ ಯಾಂತ್ರೀಕರಣ: ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಸದರಿ ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

- ಕೃಷಿ ಸಂಸ್ಕರಣೆ: ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

- 'ಸೂಕ್ಷ್ಮ ನೀರಾವರಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ, ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತಿದೆ.

- ಸಸ್ಯ ಸಂರಕ್ಷಣೆ: ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ ಮಾಡಲಾಗುತ್ತಿದೆ.

- ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆದ ಎಲ್ಲಾ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

- ಸಾವಯವ ಇಂಗಾಲ ಅಭಿಯಾನ: ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು.

- ಬೆಂಬಲ ಬೆಲೆ: ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗು ಹಿಂಗಾರು ಹಂಗಾಮಿಗೆ ಮುಂಚಿತವಾಗಿ ಬೆಂಬಲ ಬೆಲೆ ಘೋಷಣೆ ಮಾಡುತ್ತಿದ್ದು, ಸಗಟು ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಉತ್ಪನ್ನಗಳನ್ನು ಖರೀದಿಸಲಾಗುತ್ತಿದೆ. ಅಲ್ಲದೆ, ಅವಶ್ಯಕ ಸಂದರ್ಭಗಳಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಬೆಂಬಲ ಬೆಲೆಯ ಜೊತಗೆ ರಾಜ್ಯ ಸರ್ಕಾರದ ಪ್ರೋತ್ಸಾಹಧನವನ್ನೂ ಸಹ ನೀಡಲಾಗುತ್ತಿದೆ.

- ಹೊಸ ಬೆಳೆ ವಿಮಾ ಯೋಜನೆ: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

- ಪಿ.ಎಂ.ಕಿಸಾನ್ ಯೋಜನೆ: ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತ ಕುಟುಂಬಗಳಿಗೆ ರೂ.6000 ಗಳನ್ನು 3 ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

- ಬೆಳೆ ಪರಿಹಾರ: ಪ್ರಾಕೃತಿಕ ವಿಕೋಪಗಳಿಂದ ಬೆಳೆಹಾನಿ ಸಂಭವಿಸಿದಲ್ಲಿ, ರಾಷ್ಟ್ರ ಹಾಗೂ ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೈತರಿಗೆ ಪರಿಹಾರ ನೀಡಲಾಗುತ್ತಿದೆ.

- ಕೃಷಿ ಆವರ್ತ ನಿಧಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಬೆಲೆ ಕುಸಿತವಾದಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಆವರ್ತ ನಿಧಿಯನ್ನು ನಿರ್ವಹಿಸಲಾಗುತ್ತಿದೆ.

- ರೈತರಿಗೆ ನೇರವಾಗಿ ಸಹಕಾರ ಸಂಘಗಳಿಂದ ಸಾಲದ ನೆರವು: ಸಹಕಾರ ಸಂಘಗಳ ಮೂಲಕ ರೈತರಿಗೆ ಶೂನ್ಯ ಬಡ್ಡಿಯಲ್ಲಿ ಗರಿಷ್ಠ ರೂ. 5.00 ಲಕ್ಷಗಳವರೆಗೆ ಅಲ್ಪಾವಧಿ ಸಾಲ ಮತ್ತು ಶೇ.3ರ ಬಡ್ಡಿಯಲ್ಲಿ ರೂ. 15.00 ಲಕ್ಷಗಳವರೆಗೆ ಮಧ್ಯಮಾವಧಿ ಸಾಲವನ್ನು ನೀಡಲಾಗುತ್ತದೆ.

- ಬೆಳೆ ಸಾಲಕ್ಕೆ ಸಹಾಯಧನ : ಈ ಯೋಜನೆಯಡಿ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಲ್ಲಿ ಅಲ್ಪಾವಧಿ ಸಾಲ ಪಡೆದ ರೈತರಿಗೆ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ (SLBC) ಮೂಲಕ ಸಾಲದ ಮೊತ್ತ ರೂ.1.00,000/- ಮಿತಿಯೊಳಗಿನ ಬೆಳೆ ಸಾಲ/ಅಲ್ಪಾವಧಿ ಕೃಷಿ ಸಾಲವನ್ನು ಬ್ಯಾಂಕ್ ನಿಗದಿಪಡಿಸಿದ ಅವಧಿಯೊಳಗೆ ಪಾವತಿಸಿದ ರೈತರಿಗೆ ಶೇ.1 ರ ಬಡ್ಡಿ ರಿಯಾಯಿತಿ ನೀಡಲಾಗುವುದು.

- ಕೃಷಿ ಭಾಗ್ಯ: ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದಿಂದ ನೀರು ಎತ್ತಲು ಡೀಸಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರ ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ ಸೂಕ್ಷ್ಮ (ತುಂತುರು/ಹನಿ) ನೀರಾವರಿ ಘಟಕಗಳ ಅಳವಡಿಕೆಗೆ ಶೇ.90 ರ ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ನೀಡಲಾಗುತ್ತದೆ. ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರ ಸಹಾಯಧನವನ್ನು ಒದಗಿಸಲಾಗುತ್ತಿದೆ.

- ಹೈಟೆಕ್ ಹಾರ್ವೆಸ್ಟರ್ ಹಬ್- ಹೈಟೆಕ್ ಹಾರ್ವೆಸ್ಟರ್ ಹಬ್ ಗಳ ಸ್ಥಾಪನೆಗೆ ಶೇ.40 ರಿಂದ ಶೇ.70 ರಷ್ಟು ಸಹಾಯಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರೆ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಟ ರೂ.100.00 ಲಕ್ಷಗಳಿಗೆ ಮೀರದಂತೆ ಅನುದಾನ ನೀಡಲಾಗುತ್ತದೆ.

- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮದಡಿ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ" ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆಗೆ ಕ್ರಮ ಕೈಗೊಳ್ಳಲಾಗಿದೆ.

- ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds): ವಿವಿಧ ಆಹಾರ ಬೆಳೆಗಳು, ದ್ವಿದಳ

ಧಾನ್ಯಗಳು, ಹತ್ತಿ, ಕಬ್ಬು ಮತ್ತು ಎಣ್ಣೆ ಕಾಳು ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನದಡಿ ನೀಡಲಾಗುತ್ತದೆ.

- ರೈತನು ಆತ್ಮಹತ್ಯೆ ಮಾಡಿಕೊಂಡ ಮಾಹಿತಿ ತಿಳಿದುಬಂದ ತಕ್ಷಣ ಆಯಾ ಉಪವಿಭಾಗಾಧಿಕಾರಿ, ಸಹಾಯಕ ಕೃಷಿ ನಿರ್ದೇಶಕರು, ತಹಶೀಲ್ದಾರ್, ಇನ್ಸ್‌ಸ್ಪೆಕ್ಟರ್ ಆಫ್ ಪೊಲೀಸ್ ಮತ್ತು ಹಿರಿಯ ಅಧಿಕಾರಿಗಳ ತಂಡವು 24 ಗಂಟೆಗಳ ಒಳಗಾಗಿ ರೈತರ ನಿವಾಸಕ್ಕೆ ಭೇಟಿ ನೀಡಿ ರೈತ ಕುಟುಂಬಗಳಿಗೆ ಸಾಂತ್ವನ ಹೇಳುವ ಮತ್ತು ಆತ್ಮಸ್ಥೈರ್ಯ ತುಂಬವ ಕೆಲಸ ಮಾಡುತ್ತಿದ್ದಾರೆ. ರೈತ ಆತ್ಮಹತ್ಯೆ ಪ್ರಕರಣಗಳಿಗೆ ಪರಿಹಾರ ಪಾವತಿಸುವ ಬಗ್ಗೆ ಉಪವಿಭಾಗಾಧಿಕಾರಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ನಿರ್ಣಯವನ್ನಾಧರಿಸಿ ಅರ್ಹ ಪ್ರಕರಣಗಳಲ್ಲಿ ಸಂಬಂಧಪಟ್ಟ ವಾರಸುದಾರರಿಗೆ ರೂ. 5.00 ಲಕ್ಷಗಳ ಪರಿಹಾರವನ್ನು ಆಯುಕ್ತರು, ಕೆ.ಎಸ್.ಡಿ.ಎಂ.ಎ ಮತ್ತು ಎಸ್. ಎಸ್.ಪಿ ಇವರಿಂದ ಕೇಂದ್ರೀಕೃತವಾಗಿ ಡಿ.ಬಿ.ಟಿ ಮುಖಾಂತರ ಪಾವತಿಸಲು ಕ್ರಮವಹಿಸಲಾಗುತ್ತಿದೆ.

- ಮುಂದುವರೆದು, ಆತ್ಮಹತ್ಯೆ ಮಾಡಿಕೊಂಡ ರೈತನ ಪತ್ನಿಗೆ ಮಾಸಿಕ ಪಿಂಚಣಿ ರೂ.2000/- ಗಳನ್ನು ರೈತ ಪತ್ನಿ ವಿಧವಾ ವೇತನ ಯೋಜನೆಯಡಿ ಕೆ.ಎಸ್.ಡಿ.ಎಂ.ಎ ಮತ್ತು ಎಸ್. ಎಸ್.ಪಿ ಆಯುಕ್ತಾಲಯದಿಂದ ಕೇಂದ್ರೀಕೃತವಾಗಿ ಡಿ.ಬಿ.ಟಿ ಮುಖಾಂತರ ಪಾವತಿಸಲಾಗುತ್ತಿದೆ.

*******

G. N. [illegible]

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ. & ಬಾ.ನಿ)
ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು – 560 001